ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) ಸರ್ಕಾರದ ಅಧಿಸೂಚನೆ ಸಂಖ್ಯೆ ಎಲ್ಆರ್ಡಿ.87 (ಭಾಗ.3) ಬೆಂಗಳೂರು ದಿನಾಂಕ 2.8.97ರಂತೆ 25.8.97ರಿಂದ ಹೊಸದಾಗಿ ಉಡುಪಿ ಜಿಲ್ಲೆಯ ಅಸ್ತಿತ್ವಕ್ಕೆ ಬಂದಿದೆ. ಆದರೆ ಹೊಸ ಜಿಲ್ಲೆಗಳಿಗೆ 1998-99ನೇ ಆರ್ಥಿಕ ವರ್ಷದಿಂದ ಮಾತ್ರ ಸಹಾಯಧನ ಬಿಡುಗಡೆ ಮಾಡಲಾಗುವುದು.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ವಿಷಯ: ಕುಂದಾಪುರ ಸಾರ್ವಜನಿಕ ಆಸ್ಪತ್ರೆಯ ಬೇಡಿಕೆಗಳನ್ನು ಪೂರೈಸುವುದು.

987 (1700)

ಶ್ರೀ ಕೆ.ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ಕುಂದಾಪುರ ಸಾರ್ವಜನಿಕ ಆಸ್ಪತ್ರೆಯಿಂದ ಯಾವ್ಯಾವ ಅವಶ್ಯಕತೆಗಳ ಬಗ್ಗೆ ಇಲಾಖೆಗೆ ಬಂದ ಬೇಡಿಕೆಗಳಾವುವು?

ಆ) ಹಾಗೆ ಬಂದ ಬೇಡಿಕೆಯಲ್ಲಿ ಎಷ್ಟು ಪೂರೈಸಲಾಗಿದೆ?

ಇ) ಉಳಿದ ಬೇಡಿಕೆಗಳನ್ನು ಯಾವಾಗ ಪೂರೈಸಲಾಗುವುದು?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಕುಂದಾಪುರ ಸಾರ್ವಜನಿಕ ಆಸ್ಪತ್ರೆಯಿಂದ ಒಟ್ಟು 113 ಸಲಕರಣೆಗಳನ್ನು ಪೂರೈಸಲು ಬೇಡಿಕೆಯು ಬಂದಿದೆ.

ಆ) ಈ ಪೈಕಿ 64 ಸಲಕರಣೆಗಳನ್ನು ಈಗಾಗಲೇ ಪೂರೈಸಲಾಗಿದೆ.

ಇ) ಈ ಯೋಜನಾ ಅವಧಿಯು 5 ವರ್ಷಗಳದ್ದಾಗಿದ್ದು ಯೋಜನೆಯ ಪ್ರಸ್ತಾವನೆಯಲ್ಲಿ ನಮೂದಿತವಾದ ಎಲ್ಲಾ ಸಲಕರಣೆಗಳನ್ನು ಹಂತ ಹಂತವಾಗಿ ಪೂರೈಸಲಾಗುವುದು.

ವಿಷಯ: ಬೆಂಗಳೂರು ನಗರದಲ್ಲಿನ ಗ್ರಂಥಾಲಯಗಳಲ್ಲಿ ಕನ್ನಡ ಪುಸ್ತಕಗಳನ್ನು ಒದಗಿಸುವುದು.

988 (1341)

ಶ್ರೀ ರಾಮಲಿಂಗಾರೆಡ್ಡಿ (ಜಯನಗರ): ಮಾನ್ಯ ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಗ್ರಂಥಾಲಯ ಇಲಾಖೆಯಿಂದ ನಡೆಸುವ ಗ್ರಂಥಾಲಯಗಳ ಸಂಖ್ಯೆ ಎಷ್ಟು?

ಆ) ಈ ಗ್ರಂಥಾಲಯಗಳಲ್ಲಿ ಕನ್ನಡ ಪುಸ್ತಕಗಳು, ವಾರ ಪಾಕ್ಷಿಕ ಹಾಗೂ ಮಾಸಪತ್ರಿಕೆಗಳನ್ನು ಸಾಕಷ್ಟು ತರಿಸುತ್ತಿಲ್ಲವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಸರ್ಕಾರ ಇದರ ಬಗ್ಗೆ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಆರ್.ಕೃಷ್ಣಪ್ಪ (ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ರಾಜ್ಯ ಸಚಿವರು):

ಅ) 69.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ವಿಷಯ: ಜಯನಗರದ ಗ್ರಂಥಾಲಯ ಸೇವಾ ಕೇಂದ್ರದಲ್ಲಿ ಸಿಬ್ಬಂದಿ ಕೊರತೆ.

989 (1340)

ಶ್ರೀ ರಾಮಲಿಂಗಾರೆಡ್ಡಿ (ಜಯನಗರ): ಮಾನ್ಯ ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ಜಯನಗರದ 5ನೇ ಬ್ಲಾಕಿನಲ್ಲಿರತಕ್ಕ ಕೇಂದ್ರ ಗ್ರಂಥಾಲಯ ವ್ಯಾಪ್ತಿಯಲ್ಲಿರತಕ್ಕ ಸೇವಾ ಕೇಂದ್ರದಲ್ಲಿ ಸಿಬ್ಬಂದಿ ಕೊರತೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಅಗತ್ಯ ಸಿಬ್ಬಂದಿ ಒದಗಿಸಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಇ) ಈ ಸೇವಾ ಕೇಂದ್ರದ ಕೆಲಸದ ವೇಳೆಯನ್ನು ಹೆಚ್ಚು ಮಾಡುವ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?